# VIJAYA VITTALA COMPOSITE PU COLLEGE

**Saraswathipuram, Mysore- 570 009, Ph 0821-4243700**

**Date: 21.6.2025**

ಗೆ,
ಸಂಪಾದಕರು,
ದಿನಪತ್ರಿಕೆ,
ಮೈಸೂರು.

**ವಿಜಯ ವಿಠಲ ಕಾಲೇಜಿನ ಸಾಂಸ್ಕೃತಿಕ ವೇದಿಕೆಯ ಉದ್ಘಾಟನೆ**
**"ಪಠ್ಯೇತರ ಚಟುವಟಿಕೆಗಳಿಂದ ವ್ಯಕ್ತಿತ್ವ ವಿಕಸನ" – ಸೋನಿ ಮುಲೇವಾ**

ವಿಜಯ ವಿಠಲ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಸಾಂಸ್ಕೃತಿಕ ವೇದಿಕೆಯನ್ನು ಖ್ಯಾತ ರಂಗಭೂಮಿ ಮತ್ತು ಕಿರುತೆರೆ ಕಲಾವಿದರು, ಸಂಸ್ಥೆಯ ಹಿರಿಯ ವಿದ್ಯಾರ್ಥಿನಿ ಕುಮಾರಿ ಸೋನಿ ಮುಲೇವಾ ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿದರು. ಅವರು ಮಾತನಾಡುತ್ತಾ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ವ್ಯಕ್ತಿತ್ವ ವಿಕಸನವಾಗಲು ಸಹಕಾರಿಯಾಗುತ್ತದೆ. ಸಾಂಸ್ಕೃತಿಕ ಚಟುವಟಿಕೆಯು ಮಾನಸಿಕ ದೃಢತೆ, ಇಚ್ಛಾಶಕ್ತಿಯನ್ನು ಹೆಚ್ಚಿಸಿ ಯಾಂತ್ರಿಕ ಬದುಕಿನ ಒತ್ತಡವನ್ನು ಕಡಿಮೆ ಮಾಡುತ್ತದೆ. ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಂಡು ಸದೃಢ ಸಮಾಜ ನಿರ್ಮಾಣ ಮಾಡಬೇಕು. ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಲು ಶಿಕ್ಷಣ ಅತ್ಯಗತ್ಯ. ನಿರ್ದಿಷ್ಟವಾದ ಗುರಿಯಿದ್ದಾಗ ಪ್ರತಿಯೊಂದು ಕ್ಷೇತ್ರದಲ್ಲೂ ಶ್ರಮಕ್ಕೆ ತಕ್ಕ ಪ್ರತಿಫಲ ನಿಶ್ಚಿತ. ವಿದ್ಯಾರ್ಥಿಗಳು ಓದಿನ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕೆಂದು ಕರೆ ನೀಡಿದರು. ವಿದ್ಯಾಸಂಸ್ಥೆಗಳು ಪ್ರತಿ ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಿದಾಗ ವಿದ್ಯಾರ್ಥಿಯಲ್ಲಿಯ ಕಲಾವಿದ ಬೆಳೆಯಲು ಸಾಧ್ಯವಾಗುತ್ತದೆ.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರಿನ ಖ್ಯಾತ ಸುಗಮ ಸಂಗೀತ ಗಾಯಕರು ಮತ್ತು ಜೀ ಸರಿಗಮಪ ಸೀಜನ್ 21ರ ಬಹುಮಾನ ವಿಜೇತರೂ ಆದ ಕು. ರಶ್ಮಿ.ಡಿ ಮಾತನಾಡುತ್ತಾ ನಮ್ಮಲ್ಲಿರುವ ಸುಪ್ತವಾದ ಪ್ರತಿಭೆಯನ್ನು ಅವಕಾಶ ಸಿಕ್ಕಾಗ ಪ್ರಕಾಶಗೊಳಿಸಿ ಉನ್ನತ ಮಟ್ಟದಲ್ಲಿ ಸಾಧನೆ ಮಾಡಲು ದೃಢ ಸಂಕಲ್ಪ ಮಾಡಬೇಕು. ನಮ್ಮ ಪ್ರತಿಭೆಯು ಅರಳುವಂತೆ ಮಾಡುವಲ್ಲಿ ಕಾರ್ಯತತ್ಪರರಾಗಬೇಕು ಎಂದು ಹೇಳಿ ಚಲನಚಿತ್ರ ಗೀತೆಗಳನ್ನು ಪ್ರಸ್ತುತಪಡಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಹೆಚ್. ಸತ್ಯಪ್ರಸಾದ್ ಪ್ರಾಸ್ತಾವಿಕವಾಗಿ ಮಾತನಾಡಿ ವೇದಿಕೆಯ ಉದ್ದೇಶ, ಮಹತ್ವ ಮತ್ತು ಕಾರ್ಯಚಟುವಟಿಕೆಗಳನ್ನು ವಿವರಿಸಿ, ಅತಿಥಿಗಳನ್ನು ಪರಿಚಯಿಸಿದರು. ವಿದ್ಯಾರ್ಥಿಗಳ ಪ್ರತಿಭೆಯನ್ನು ಜಾಗೃತಗೊಳಿಸಿ ಅದನ್ನು ಪೋಷಿಸಲು ಸಾಂಸ್ಕೃತಿಕ ವೇದಿಕೆಯು ಸಹಕಾರಿ. ಲಲಿತಕಲೆಗಳಲ್ಲಿ ಆಸಕ್ತಿ ತೋರುವುದರಿಂದ ಏಕಾಗ್ರತೆ ಹೆಚ್ಚಿ ಶೈಕ್ಷಣಿಕವಾಗಿ ಉತ್ತಮ ಸಾಧನೆಗಳನ್ನು ಮಾಡಲು ಸಾಧ್ಯವಾಗುತ್ತದೆ. ಸಾಧಕರ ಸಾಧನೆಗಳು ನಮ್ಮೆಲ್ಲರಿಗೂ ಪ್ರೇರಣೆಯಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ಖ್ಯಾತ ಹಿನ್ನೆಲೆ ಗಾಯಕಿ ಕು. ರಶ್ಮಿ.ಡಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಉತ್ಸಾ ಶ್ರೀನಾಥ್ ಪ್ರಾರ್ಥಿಸಿ, ತ್ರಿಶಾ ಶಂಕರ್ ಸ್ವಾಗತಿಸಿದರು. ಸ್ಕಂದ ಶರ್ಮ ವಂದನಾರ್ಪಣೆ ಮಾಡಿದರು. ಕವನರವರು ಕಾರ್ಯಕ್ರಮವನ್ನು ನಿರೂಪಿಸಿದರು. ಸ್ಫೂರ್ತಿ ಮತ್ತು ಸಂಗಡಿಗರು ಗೀತಗಾಯನವನ್ನು ಪ್ರಸ್ತುತಪಡಿಸಿದರು.

**ಚಿತ್ರ ಶೀರ್ಷಿಕೆ : ವಿಜಯ ವಿಠಲ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಸಾಂಸ್ಕೃತಿಕ ವೇದಿಕೆಯನ್ನು ಖ್ಯಾತ ರಂಗಭೂಮಿ ಮತ್ತು ಕಿರುತೆರೆ ಕಲಾವಿದರು, ಸಂಸ್ಥೆಯ ಹಿರಿಯ ವಿದ್ಯಾರ್ಥಿನಿ ಕುಮಾರಿ ಸೋನಿ ಮುಲೇವಾ ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿದರು. ಮೈಸೂರಿನ ಖ್ಯಾತ ಸುಗಮ ಸಂಗೀತ ಗಾಯಕರು ಮತ್ತು ಜೀ ಸರಿಗಮಪ ಸೀಜನ್ 21ರ ಬಹುಮಾನ ವಿಜೇತರೂ ಆದ ಕು. ರಶ್ಮಿ.ಡಿ, ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಹೆಚ್. ಸತ್ಯಪ್ರಸಾದ್, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳನ್ನು ಕಾಣಬಹುದು.**

# CULTURAL FORUM OF VIJAYA VITTALA INAUGURATED

**Alumnus of Vijaya Vittala PU College, renowned Kannada serial actress Kum. Sony Mulewa inaugurated the Cultural Forum of the Vijaya Vittala PU college by lighting the lamp. Kum. Rashmi.D, renowned playback singer and prize winner in Zee Sa.Ra.Ga.Ma.Pa season-21 was felicitated on the occasion. Principal Sri H. Satyaprasad, lecturers and students were present on the occasion.**



